ವಿಷಯ:- ಖಾಸಗಿ ವಿದ್ಯಾರ್ಥಿ ನಿಲಯಗಳ ಅನುದಾನ.

1384 (1667) **ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ):-** ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಯುವ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರ ವಿದ್ಯಾರ್ಥಿನಿಲಯಗಳೆಷ್ಟು?

ಆ) ಸಮಾಜ ಕಲ್ಯಾಣ ಇಲಾಖೆಯು ಎಷ್ಟು ಖಾಸಗಿ ವಿದ್ಯಾರ್ಥಿನಿಲಯಗಳಿಗೆ ಅನುದಾನ ನೀಡುತ್ತಿದೆ?

ಶ್ರೀ ಕೆ.ಎಂ. ಕೃಷ್ಣಾರೆಡ್ಡಿ (ಸಮಾಜ ಕಲ್ಯಾಣ ಸಚಿವರು):-

ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಪರಿಶಿಷ್ಟ ಜಾತಿ: ಪರಿಶಿಷ್ಟ ವರ್ಗದ ವಿದ್ಯಾರ್ಥಿ: ವಿದ್ಯಾರ್ಥಿನಿಯರಿಗಾಗಿ ಒಟ್ಟು 1099 ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ನಡೆಸಲಾಗುತ್ತಿದೆ. ಅವುಗಳ ವಿವರ ಈ ಕೆಳಕಂಡಂತಿದೆ:

ಕ್ರಮ ಸಂಖ್ಯೆ	ವಿದ್ಯಾರ್ಥಿನಿಲಯದ ವಿವರ	ಬಾಲಕರ ವಿದ್ಯಾರ್ಥಿ ನಿಲಯ	ಬಾಲಕಿಯರ ವಿದ್ಯಾರ್ಥಿ ನಿಲಯ	ಒಟ್ಟು
1.	ಸರ್ಕಾರಿ ಪರಿಶಿಷ್ಟ ಜಾತಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯ	677	235	912
2.	ಸರ್ಕಾರಿ ಪರಿಶಿಷ್ಟ ವರ್ಗದ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯ	33	11	44
3.	ಸರ್ಕಾರಿ ಕಾಲೇಜು ವಿದ್ಯಾರ್ಥಿನಿಲಯಗಳು	124	19	143
	ಒಟ್ಟು	834	265	1099

ಆ) ಸಮಾಜ ಕಲ್ಯಾಣ ಇಲಾಖೆಯು ಪರಿಶಿಷ್ಟ ಜಾತಿ: ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗಾಗಿ ಒಟ್ಟು 366 ಖಾಸಗಿ ವಿದ್ಯಾರ್ಥಿನಿಲಯಗಳಿಗೆ ಅನುದಾನ ನೀಡುತ್ತಿದೆ.

ವಿಷಯ:- ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ಭೂ ಮಂಜೂರಾತಿ.

1385 (2371) **ಶ್ರೀ ಕೆ. ಪ್ರತಾಪ್‌ಚಂದ್ರ ಶೆಟ್ಟಿ (ಕುಂದಾಪುರ):-** ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಭೂರಹಿತ ಪರಿಶಿಷ್ಟ ಜಾತಿ: ಮತ್ತು ಪರಿಶಿಷ್ಟ ವರ್ಗದವರಿಗೆ ಭೂಮಿಯನ್ನು

ಮಂಜೂರು ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ?

ಆ) ಕಳೆದ 5 ವರ್ಷಗಳಿಂದ ಎಷ್ಟು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ಭೂಮಿಯನ್ನು ಮಂಜೂರು ಮಾಡಲಾಗಿದೆ?

ಇ) ಭೂಮಿಯನ್ನು ಖರೀದಿಸಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ಮಂಜೂರು ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ?

ಈ) ಕಳೆದ 5 ವರ್ಷಗಳಿಂದ ಎಷ್ಟು ಭೂಮಿಯನ್ನು ಖರೀದಿಸಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ನೀಡಲಾಗಿದೆ?

ಶ್ರೀ ಕೆ.ಎಂ.ಕೃಷ್ಣಾರೆಡ್ಡಿ (ಸಮಾಜ ಕಲ್ಯಾಣ ಸಚಿವರು):-

ಆ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ಭೂಮಿಯನ್ನು ಮಂಜೂರು ಮಾಡುವ ಯೋಜನೆಯು ನಿಗಮದಲ್ಲಿ ಇರುವುದಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) 1990-91 ನೇ ಸಾಲಿನಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ನಿಗಮದ ಭೂ ರಹಿತ ಕೃಷಿ ಕಾರ್ಮಿಕರಿಗೆ ಭೂ ಒಡೆತನ ಯೋಜನೆಯಲ್ಲಿ ಭೂಮಿಯನ್ನು ಖರೀದಿಸಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ಕೊಡಲಾಗುತ್ತಿದೆ.

ಈ) ಕಳೆದ 5 ವರ್ಷಗಳಿಂದ 9688 ಪರಿಶಿಷ್ಟ ಜಾತಿ ಫಲಾನುಭವಿಗಳಿಗೆ 13962.53 ಎಕರೆ ಖುಷ್ಕಿ ಮತ್ತು 2367.16 ಎಕರೆ ತರಿ ಜಮೀನನ್ನು ಹಾಗೂ 435 ಪರಿಶಿಷ್ಟ ವರ್ಗದ ಫಲಾನುಭವಿಗಳಿಗೆ 568.03 ಎಕರೆ ಖುಷ್ಕಿ 142.39 ಎಕರೆ ತರಿ ಜಮೀನನ್ನು ಖರೀದಿಸಿ ನೋಂದಣಿ ಮಾಡಿಸಲಾಗಿದೆ.

ವಿಷಯ:- ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಭಾರಿ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳ ಪ್ರಾರಂಭ.

1386 (2371) **ಶ್ರೀ ಕೆ. ಪ್ರತಾಪ್‌ಚಂದ್ರ ಶೆಟ್ಟಿ (ಕುಂದಾಪುರ):-** ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಂಪನ್ಮೂಲಗಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ ಐದು ವರ್ಷಗಳಿಂದೀಚೆಗೆ ಮಂಜೂರಾದ ಭಾರಿ ಮತ್ತು ಮಧ್ಯಮ ಪ್ರಮಾಣದ ಕೈಗಾರಿಕೆಗಳು ಯಾವುವು? (ಮಂಜೂರಾದ ಗ್ರಾಮ ಮತ್ತು ತಾಲ್ಲೂಕು ಮತ್ತು ಸ್ವಾಧೀನತೆ ಕೇಳಿದ ಸ್ಥಳದ ವಿಸ್ತೀರ್ಣದ ವಿವರ ನೀಡುವುದು)

ಆ) ಮಂಜೂರಾಗಿದ್ದಲ್ಲಿ ಈ ಕೈಗಾರಿಕೆಗಳನ್ನು ಎಂದು ಪ್ರಾರಂಭಿಸಲಾಗುವುದು?

ಇ) ಈ ಉದ್ದಿಮೆಗಳಿಗೆ ಸಾರ್ವಜನಿಕರ ವಿರೋಧವಿದೆಯೆ?